# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **339** |
| **ಸದಸ್ಯರ ಹೆಸರು** | : | **ಶ್ರೀ ಎನ್.ಎಸ್. ಬೋಸರಾಜು (ವಿಧಾನ ಸಭೆಯಿಂದ ಚುನಾಯಿತರಾದವರು)** |
| **ಉತ್ತರಿಸುವ ಸಚಿವರು** | : | **ಕಂದಾಯ ಸಚಿವರು** |
| **ಉತ್ತರಿಸುವ ದಿನಾಂಕ** | : | **12.12.2018** |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ನಗರದಲ್ಲಿ ಮಂಜೂರಾಗಿರುವ ಜಿಲ್ಲಾ ಆಡಳಿತ ಭವನದ ನಿರ್ಮಾಣದ ಕಾಮಗಾರಿ ಪೂರ್ಣಗೊಳಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಸರ್ಕಾರದ ಆದೇಶ ಸಂ: ಕಂಇ 113 ಡಬ್ಲ್ಯೂಬಿಆರ್ 2008, ದಿ: 07.09.2017 ರನ್ವಯ ರಾಯಚೂರು ತಾಲ್ಲೂಕಿನ ಯಕ್ಲಾಸಪುರ ಗ್ರಾಮದ ವಿವಿಧ ಸ.ನಂ.ಗಳ ಒಟ್ಟು 16.26 ಎಕರೆ ಜಮೀನಿನಲ್ಲಿ ರಾಯಚೂರು ಜಿಲ್ಲಾ ಕಛೇರಿಗಳ ಸಂಕೀರ್ಣ ಕಟ್ಟಡ ಕಾಮಗಾರಿಯನ್ನು ಕರ್ನಾಟಕ ಗೃಹ ಮಂಡಳಿ ವತಿಯಿಂದ ರೂ.25.00 ಕೋಟಿಗಳ ಅಂದಾಜು ವೆಚ್ಚದಲ್ಲಿ ಕೈಗೆತ್ತಿಕೊಳ್ಳಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಲಾಗಿದೆ.<br><br>ಮುಂದುವರೆದು, ಗುತ್ತಿಗೆದಾರರಾದ ಮೆ: ಸ್ಟಾರ್ ಬಿಲ್ಡರ್ಸ್ ಅಂಡ್ ಡೆವಲಪರ್ಸ್ ಇವರಿಗೆ ರೂ.23.62 ಕೋಟಿ ಮೊತ್ತದಲ್ಲಿ ಕಾಮಗಾರಿಯನ್ನು ನಿರ್ವಹಿಸಲು ದಿ: 22.03.2018 ರಂದು ಕಾರ್ಯಾದೇಶ ನೀಡಲಾಗಿದ್ದು, ದಿ: 19.01.2020 ರಂದು ಕಟ್ಟಡವನ್ನು ಪೂರ್ಣಗೊಳಿಸಲು ದಿನಾಂಕ ನಿಗದಿಪಡಿಸಲಾಗಿದೆ. |
| ಆ) | ರಾಯಚೂರು ಜಿಲ್ಲೆಯ ಕಂದಾಯ ಇಲಾಖೆಯಲ್ಲಿರುವ ಖಾಲಿಯಿರುವ ಹುದ್ದೆಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮಗಳೇನು? | ಜಿಲ್ಲೆಯಲ್ಲಿ 12 ಪ್ರ.ದ.ಸ/ಕಂದಾಯ ನಿರೀಕ್ಷಕರು ಮತ್ತು 19 ದ್ವಿ.ದ.ಸ ಹುದ್ದೆಗಳು ಖಾಲಿ ಇದ್ದು, ಸದರಿ ಹುದ್ದೆಗಳನ್ನು ಲೋಕಸೇವಾ ಆಯೋಗದಿಂದ ಭರ್ತಿ ಮಾಡಬೇಕಾಗಿರುತ್ತದೆ. ಜಿಲ್ಲೆಯಲ್ಲಿ 26 ಗ್ರಾಮ ಲೆಕ್ಕಾಧಿಕಾರಿಗಳ ಹುದ್ದೆ ಖಾಲಿ ಇದ್ದು, ಸರ್ಕಾರದ ನಿರ್ದೇಶನದಂತೆ ಈ ಹುದ್ದೆಗಳನ್ನು ನೇರ ನೇಮಕಾತಿ ಮಾಡಿಕೊಳ್ಳಲು ಶೀಘ್ರವೇ ಅಧಿಸೂಚನೆ ಹೊರಡಿಸಲಾಗುವುದು. |

**ಕಂಇ 84 ಡಬ್ಲ್ಯೂಬಿಆರ್ 2018**

**(ಆರ್.ವಿ. ದೇಶಪಾಂಡೆ)**
ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು